# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **304** |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಲಬುರ್ಗಿ ಜಿಲ್ಲೆಯಲ್ಲಿರುವ ಒಟ್ಟು ಬಿ.ಪಿ.ಎಲ್ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು;(ತಾಲ್ಲೂಕುವಾರು ವಿವರಗಳನ್ನು ನೀಡುವುದು)</td><td>ಕಲಬುರ್ಗಿ ಜಿಲ್ಲೆಯಲ್ಲಿರುವ ಒಟ್ಟು ಬಿ.ಪಿ.ಎಲ್. ಪಡಿತರ ಚೀಟಿದಾರರ ತಾಲ್ಲೂಕುವಾರು ಸಂಖ್ಯೆಗಳ ವಿವರಗಳು ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ತಾಲ್ಲೂಕು</th><th>ಬಿ.ಪಿ.ಎಲ್ ಪಡಿತರ ಚೀಟಿಗಳ</th></tr>
<tr><td>1.</td><td>ಅಫಜಲಪೂರ</td><td>45972</td></tr>
<tr><td>2.</td><td>ಆಳಂದ</td><td>61563</td></tr>
<tr><td>3.</td><td>ಚಿಂಚೋಳಿ</td><td>46677</td></tr>
<tr><td>4.</td><td>ಚಿತ್ತಾಪೂರ</td><td>56285</td></tr>
<tr><td>5.</td><td>ಕಲಬುರಗಿ</td><td>147538</td></tr>
<tr><td>6.</td><td>ಜೇವರ್ಗಿ</td><td>36000</td></tr>
<tr><td>7.</td><td>ಕಮಲಾಪೂರ</td><td>24365</td></tr>
<tr><td>8.</td><td>ಕಾಳಗಿ</td><td>23322</td></tr>
<tr><td>9.</td><td>ಸೇಡಂ</td><td>41204</td></tr>
<tr><td>10.</td><td>ಶಾಹಬಾದ</td><td>11593</td></tr>
<tr><td>11.</td><td>ಯಡ್ರಾಮಿ</td><td>23965</td></tr>
</table></td></tr>
<tr><td>ಆ</td><td>ಈ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ಸರ್ಕಾರ ನೀಡುತ್ತಿರುವ ದವಸ-ಧಾನ್ಯಗಳು ಯಾವುವು; ಒಬ್ಬ ವ್ಯಕ್ತಿಗೆ ಯಾವ ಪ್ರಮಾಣದಲ್ಲಿ ನೀಡಲಾಗುತ್ತಿದೆ; (ವಿವರಗಳನ್ನು ನೀಡುವುದು)</td><td>ಪ್ರತಿ ಅಂತ್ಯೋದಯ ಅನ್ನ ಯೋಜನೆ (AAY) ಕಾರ್ಡಿಗೆ 35 ಕೆ.ಜಿ ಆಹಾರ ಧಾನ್ಯಗಳನ್ನು ಪ್ರತಿ ಮಾಹೆ ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 14 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 21 ಕೆ.ಜಿ ರಾಗಿ ಹಂಚಿಕೆ ಮಾಡಲಾಗುತ್ತಿದೆ.<br>ಕೇಂದ್ರ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ಪ್ರತಿ ಮಾಹೆ 5 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 2 ಕೆ.ಜಿ ಅಕ್ಕಿ</td></tr>
</table>

| | | |
|---|---|---|
| | | ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ ರಾಗಿ ಲಭ್ಯ ಪ್ರಮಾಣದಂತೆ 03 ಕೆ.ಜಿ ರಾಗಿ ಹಂಚಿಕೆ ಮಾಡಲಾಗುತ್ತಿದೆ.<br>ರಾಜ್ಯ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ರಾಜ್ಯ ಸರ್ಕಾರದಿಂದ ಪ್ರತಿ ಮಾಹೆ 5 ಕೆ.ಜಿ ಅಕ್ಕಿಯನ್ನು ಹಂಚಿಕೆ ಮಾಡಲಾಗುತ್ತಿದೆ.<br>ರಾಜ್ಯ ಸರ್ಕಾರದಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಅರ್ಹ ಫಲಾನುಭವಿಗೆ 05 ಕೆ.ಜಿ ಹೆಚ್ಚುವರಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. |
| ಇ | ಕಳೆದ 3 ವರ್ಷಗಳಲ್ಲಿ ಕಲಬುರ್ಗಿ ಜಿಲ್ಲೆಗೆ ಸಲ್ಲಿಕೆಯಾಗಿರುವ ಬಿ.ಪಿ.ಎಲ್ ಪಡಿತರ ಅರ್ಜಿಗಳ ಸಂಖ್ಯೆ ಎಷ್ಟು;(ತಾಲ್ಲೂಕುವಾರು ವಿವರಗಳನ್ನು ನೀಡುವುದು) | ಕಳೆದ 3 ವರ್ಷಗಳಲ್ಲಿ ಕಲಬುರ್ಗಿ ಜಿಲ್ಲೆಗೆ ಸಲ್ಲಿಕೆಯಾಗಿರುವ ಬಿ.ಪಿ.ಎಲ್. ಪಡಿತರ ಅರ್ಜಿಗಳ ತಾಲ್ಲೂಕುವಾರು ವಿವರಗಳು ಈ ಕೆಳಕಂಡಂತಿದೆ. (see table below) |
| ಈ | ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಎಲ್ಲಾ ಬಿ.ಪಿ.ಎಲ್ ಕಾರ್ಡ್‌ಗಳನ್ನು ಮಾನ್ಯ ಮಾಡಲಾಗಿದೆಯೆ; ಇದರಲ್ಲಿ ರದ್ದು ಮಾಡಿರುವ ಕಾರ್ಡ್‌ಗಳ ಸಂಖ್ಯೆ ಎಷ್ಟು; ಯಾವ ಕಾರಣಕ್ಕಾಗಿ ರದ್ದುಗೊಳಿಸಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು) | ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಎಲ್ಲಾ ಬಿ.ಪಿ.ಎಲ್ ಕಾರ್ಡಗಳನ್ನು ಮಾನ್ಯ ಮಾಡಲಾಗಿದೆ. ಇದರಲ್ಲಿ ಯಾವುದೇ ಪಡಿತರ ಚೀಟಿಗಳನ್ನು ರದ್ದು ಮಾಡಿರುವುದಿಲ್ಲ.<br>ಆದರೆ ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7.76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ. |

| ಕ್ರ.ಸಂ | ತಾಲ್ಲೂಕು | ಸಲ್ಲಿಕೆಯಾಗಿರುವ ಬಿಪಿಎಲ್ ಪಡಿತರ ಚೀಟಿಗಳ ಸಂಖ್ಯೆ |
|---|---|---|
| 1. | ಅಫಜಲಪೂರ | 8578 |
| 2. | ಆಳಂದ | 11470 |
| 3. | ಚಿಂಚೋಳಿ | 9360 |
| 4. | ಚಿತ್ತಾಪೂರ | 10834 |
| 5. | ಕಲಬುರಗಿ | 32112 |
| 6. | ಜೇವರ್ಗಿ | 7710 |
| 7. | ಕಮಲಾಪೂರ | 3921 |
| 8. | ಕಾಳಗಿ | 3777 |
| 9. | ಸೇಡಂ | 6956 |
| 10. | ಶಾಹಬಾದ | 1277 |
| 11. | ಯಡ್ರಾಮಿ | 3037 |
| | ಒಟ್ಟು | 99068 |

| | | |
|---|---|---|
| | | 1. CBDT Income Group Annual Income > 1,20,000<br>2. GSTN Gross Turnover >25 Lakhs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC >12 Months<br>8. PDS Silent RC 6-12 Months<br>9. PDS Single Member Below 18 Years<br>10. PM KISAN Land Holding >7.5 Acres<br>11. UIDAI Aadhaar Status Deceased<br>12. Vehicle Ownership value Owning LIGHT MOTOR VEHICLE<br>13. Vehicle Ownership value Owning MEDIUM MOTOR VEHICLE<br>14. Vehicle Ownership value Owning OTHER THAN MENTIONED ABOVE<br>ಮೇಲಿನ ಕಾರಣದಿಂದಾಗಿ ಕಲಬುರ್ಗಿ ಜಿಲ್ಲೆಯಲ್ಲಿ ಒಟ್ಟು 10,760 ಪಡಿತರ ಚೀಟಿಗಳನ್ನು ಪರಿವರ್ತನೆ ಮಾಡಲಾಗಿರುತ್ತದೆ. |

**ಇ-ಆನಾಸ 251 ಡಿಆರ್‌ಎ 2026**

(ರಿಜ್ವಾನ್ ಅರ್ಷದ್)
ಆಹಾರ, ನಾಗರಿಕ ಸರಬರಾಜು, ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಸಚಿವರು